**ಕರ್ನಾಟಕ ಲೋಕ ಸೇವಾ ಆಯೋಗ,**

**ಉದ್ಯೋಗ ಸೌಧ, ಬೆಂಗಳೂರು**

ಸಂಖ್ಯೆ: ಪಿಎಸ್‌ಸಿ 508 ಆರ್‌ಟಿಬಿ-2/2023-24/514 ದಿನಾಂಕ: 19 -06-2024

# ತಿದ್ದುಪಡಿ ಅಧಿಸೂಚನೆ

ಆಯೋಗವು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಮತ್ತು ತಿದ್ದುಪಡಿ ನಿಯಮ 2022 ರನ್ವಯ ಸಾರಿಗೆ ಇಲಾಖೆಯಲ್ಲಿನ ಗ್ರೂಪ್ ಸಿ ವೃಂದದ ಮೋಟಾರು ವಾಹನ ನಿರೀಕ್ಷಕರು 70 (ಆರ್‌ಪಿಸಿ) ಮತ್ತು 06 (ಹೈ.ಕ.) ಹುದ್ದೆಗಳ ನೇಮಕಾತಿ ಸಂಬಂಧ ದಿ:14-03-2024 ರಂದು ವೃಂದಾವಾರು ಪ್ರತ್ಯೇಕವಾಗಿ ಅಧಿಸೂಚನೆ ಹೊರಡಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿ:22-04-2024 ಮತ್ತು ಕೊನೆಯ ದಿ:21-05-2024 ಎಂದು ನಿಗದಿಪಡಿಸಲಾಗಿತ್ತು. ಆದರೆ ತಾಂತ್ರಿಕ ಕಾರಣದಿಂದ ಸದರಿ ಹುದ್ದೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕಾಲಮಿತಿಯನ್ನು ದಿ:22-04-2024 ಮತ್ತು 17-05-2024ರ ಪ್ರಕಟಣೆಯಲ್ಲಿ ಮುಂದೂಡಲಾಗಿತ್ತು. ಪ್ರಸ್ತುತ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕಾಲಮಿತಿಯನ್ನು ಈ ಕೆಳಗಿನಂತೆ ಮರುನಿಗದಿಪಡಿಸಿ ದಿ:30-05-2024ರ ಪ್ರಕಟಣೆಯ ಮೂಲಕ ಅಭ್ಯರ್ಥಿಗಳ ಮಾಹಿತಿಗಾಗಿ ತಿಳಿಸಲಾಗಿದೆ.

| | |
|---|---|
| ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 30-05-2024 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30-06-2024 |
| ಶುಲ್ಕ ಪಾವತಿಸಲು ಕೊನೆಯ ದಿನಾಂಕ | 30-06-2024 |

ಉಳಿದಂತೆ ದಿನಾಂಕ:14-03-2024ರ ಅಧಿಸೂಚನೆಗಳಲ್ಲಿನ ಇತರೆ ಷರತ್ತು/ಸೂಚನೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

(ಡಾ. ರಾಕೇಶ್ ಕುಮಾರ್. ಕೆ)
ಕಾರ್ಯದರ್ಶಿ
ಕರ್ನಾಟಕ ಲೋಕ ಸೇವಾ ಆಯೋಗ.